ಮಂಗಳವಾರ 16-09-2025 ಬೆಂಗಳೂರು ಬೆಲೆ: 5ರೂ, 4ಪುಟಗಳು ಸಂಪುಟ 01-ಸಂಚಿಕೆ 48 Digital Varthe Kannada Daily Volume 01 - Issue 48 Tuesday 16-09-2025 Price: 5/- Rs 2 Pages Bengalore

DIGITAL VARTHE
www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## ಭವಿಷ್ಯವಾಣಿಗಳನ್ನು ಮೀರಿಸಿ ಭಾರತ ಅಭಿವೃದ್ಧಿ ಹಾದಿಯಲ್ಲಿ ಮುನ್ನಡೆಯುತ್ತಿದೆ :ಭಾಗವತ್



ಇಂದೋರ್: ಭಾರತವು ಎಲ್ಲರ ಭವಿಷ್ಯವಾಣಿಗಳನ್ನು ತಪ್ಪಾಗಿ ಸಾಬೀತುಪಡಿಸುವ ಮೂಲಕ ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ, ಏಕೆಂದರೆ ಇದು ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಾಂಪ್ರದಾಯಿಕ ತತ್ವಶಾಸ್ತ್ರದಲ್ಲಿ ನಂಬಿಕೆಯಿಂದ ನಡೆಸಲ್ಪಡುತ್ತದೆ ಎಂದಿದ್ದಾರೆ.

ಭಾರತದ ಆರ್ಥಿಕತೆಯು ಪ್ರಸ್ತುತ ಹಣಕಾಸು ವರ್ಷದ ಏಪ್ರಿಲ್-ಜೂನ್ ತ್ರೈಮಾಸಿಕದಲ್ಲಿ ನಿರೀಕ್ಷೆಗಿಂತ ಉತ್ತಮವಾದ ಶೇ. 7.80 ರಷ್ಟು ಬೆಳವಣಿಗೆ ದರವನ್ನು ದಾಖಲಿಸಿದೆ, ಇದು ಅಮೆರಿಕ ಸುಂಕಗಳನ್ನು ವಿಧಿಸುವ ಮೊದಲು ಕಳೆದ ಐದು ತ್ರೈಮಾಸಿಕಗಳಲ್ಲಿ ಅತ್ಯಧಿಕವಾಗಿದೆ. ಮಧ್ಯಪ್ರದೇಶದ ಸಚಿವ ಪ್ರಹ್ಲಾದ್ ಸಿಂಗ್ ಪಟೇಲ್ ಅವರ ಪರಿಕ್ರಮ ಕೃಪಾ ಸಾರ್ ಪುಸ್ತಕವನ್ನು ಇಂದೋರ್‌ನಲ್ಲಿ ಬಿಡುಗಡೆ ಮಾಡಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಭಾಗವತ್, ಭಾರತವು 3,000 ವರ್ಷಗಳ ಕಾಲ ವಿಶ್ವ ನಾಯಕನಾಗಿದ್ದಾಗ ಯಾವುದೇ ಜಾಗತಿಕ ಕಲಹ ಇರಲಿಲ್ಲ ಎಂದು ಹೇಳಿದರು.

ಆ ಸಮಯದಲ್ಲಿ, ಪರಿಸರ ಎಂದಿಗೂ ಹದಗೆಟ್ಟಿರಲಿಲ್ಲ, ತಾಂತ್ರಿಕ ಪ್ರಗತಿ ಉನ್ನತ ಮಟ್ಟದಲ್ಲಿತ್ತು ಮತ್ತು ಮಾನವ ಜೀವನವು ಸಂತೋಷ ಮತ್ತು ಸುಸಂಸ್ಕೃತವಾಗಿತ್ತು ಎಂದು ಅವರು ಹೇಳಿದರು.ಆ ಯುಗದಲ್ಲಿ, ನಾವು ಜಗತ್ತನ್ನು ಮುನ್ನಡೆಸಿದೆವು, ಆದರೆ ಯಾವುದೇ ದೇಶವನ್ನು (ದಾಳಿ ಮಾಡುವ ಮೂಲಕ) ವಶಪಡಿಸಿಕೊಳ್ಳಲಿಲ್ಲ ಮತ್ತು ಯಾವುದೇ ದೇಶದ ವ್ಯಾಪಾರವನ್ನು ನಿಗ್ರಹಿಸಲಿಲ್ಲ.

ನಾವು ಯಾರ ಧರ್ಮವನ್ನೂ ಪರಿವರ್ತಿಸಲಿಲ್ಲ. ನಾವು ಎಲ್ಲಿಗೆ ಹೋದರೂ, ನಾವು ನಮ್ಮ ನಾಗರಿಕತೆಯನ್ನು ಹರಡಿದೆವು ಮತ್ತು ಜ್ಞಾನ ಮತ್ತು ಧರ್ಮಗ್ರಂಥಗಳನ್ನು ನೀಡುವ ಮೂಲಕ ಜನರ ಜೀವನವನ್ನು ಸುಧಾರಿಸಿದೆವು. ನಂತರ ಎಲ್ಲಾ ದೇಶಗಳು ತಮ್ಮದೇ ಆದ ಗುರುತನ್ನು ಹೊಂದಿದ್ದವು, ಆದರೆ ಅವುಗಳ ನಡುವೆ ಉತ್ತಮ ಸಂಭಾಷಣೆ ಇತ್ತು. ಈ (ಸಂವಾದ) ಇಂದು ಇಲ್ಲ, ಅವರು ಹೇಳಿದರು.

ವೈಯಕ್ತಿಕ ಹಿತಾಸಕ್ತಿಗಳು ಜಗತ್ತಿನಲ್ಲಿ ಘರ್ಷಣೆಗಳಿಗೆ ಕಾರಣವಾಗಿವೆ, ಅದು ಎಲ್ಲಾ ಸಮಸ್ಯೆಗಳನ್ನು ಸೃಷ್ಟಿಸಿದೆ.ಭಾರತೀಯ ಜನರ ಪೂರ್ವಜರು ವಿವಿಧ ಪಂಥಗಳು ಮತ್ತು ಸಂಪ್ರದಾಯಗಳ ಮೂಲಕ ಹಲವಾರು ಮಾರ್ಗಗಳನ್ನು ತೋರಿಸಿದ್ದಾರೆ, ಜೀವನದಲ್ಲಿ ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಮತೋಲಿತ ಹರಿವನ್ನು ಹೇಗೆ ಕಾಪಾಡಿಕೊಳ್ಳಬೇಕೆಂದು ಕಲಿಸಿದ್ದಾರೆ ಎಂದು ಭಾಗವತ್ ಹೇಳಿದರು.

ಜ್ಞಾನ, ಕ್ರಿಯೆ ಮತ್ತು ಭಕ್ತಿಯ ಸಮತೋಲಿತ ತ್ರಿಮೂರ್ತಿಗಳ ಸಾಂಪ್ರದಾಯಿಕ ತತ್ವಶಾಸ್ತ್ರದಲ್ಲಿ ನಂಬಿಕೆ ಇರುವುದರಿಂದ, ಭಾರತವು ಎಲ್ಲರ ಭವಿಷ್ಯವಾಣಿಗಳನ್ನು ತಪ್ಪೆಂದು ಸಾಬೀತುಪಡಿಸುವ ಮೂಲಕ ಅಭಿವೃದ್ಧಿಯ ಹಾದಿಯಲ್ಲಿ ನಿರಂತರವಾಗಿ ಮುಂದುವರಿಯುತ್ತಿದೆ ಎಂದು ಅವರು ಹೇಳಿದರು.ಮಾಜಿ ಬ್ರಿಟಿಷ್ ಪ್ರಧಾನಿ ವಿನ್ಸಿಟಿನ್ ಚರ್ಚಿಲ್ ಅವರನ್ನು ಉಲ್ಲೇಖಿಸಿ, ಬ್ರಿಟಿಷ್ ಆಳ್ವಿಕೆ ಕೊನೆಗೊಂಡ ನಂತರವೂ ಒಗ್ಗಟ್ಟಿನಿಂದ ಉಳಿಯುವ ಮೂಲಕ ಭಾರತವು ತನ್ನನ್ನು ತಪ್ಪು ಎಂದು ಸಾಬೀತುಪಡಿಸಿದೆ ಎಂದು ಭಾಗವತ್ ಸೂಚಿಸಿದರು.

(ಬ್ರಿಟಿಷ್ ಆಳ್ವಿಕೆಯಿಂದ) ಸ್ವಾತಂತ್ರ್ಯದ ನಂತರ, ನೀವು (ಭಾರತ) ಬದುಕಲು ಸಾಧ್ಯವಾಗುವುದಿಲ್ಲ ಮತ್ತು ವಿಭಜನೆಯಾಗುತ್ತೀರಿ ಎಂದು ವಿನ್ಸ್ಟನ್ ಚರ್ಚಿಲ್ ಒಮ್ಮೆ ಹೇಳಿದ್ದರು,

## ಪಟ್ಟಭದ್ರ ಹಿತಾಸಕ್ತಿಗಳು ಸಂವಿಧಾನ ಹಾಗೂ ಪ್ರಜಾಪ್ರಭುತ್ವ ದುರ್ಬಲಗೊಳಿಸುವ ಪ್ರಯತ್ನ ಮಾಡುತ್ತಿವೆ :ಸಿಎಂ

ಬೆಂಗಳೂರು: ಪಟ್ಟಭದ್ರ ಹಿತಾಸಕ್ತಿಗಳು ಸಂವಿಧಾನ ಹಾಗೂ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ ಪ್ರಯತ್ನ ಮಾಡುತ್ತಿದ್ದು, ಎಷ್ಟೇ ಕಷ್ಟಗಳು ಎದುರಾಗುತ್ತಿದ್ದರೂ ಇದಕ್ಕೆ ಅವಕಾಶ ನೀಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ಅಂಗವಾಗಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮದು ಬಹು ಸಂಸ್ಕೃತಿಯಲ್ಲಿ ಏಕತೆಯ ರಾಷ್ಟ್ರ. ಬಸವಣ್ಣ ಅವರ ಅನುಭವ ಮಂಟಪದಲ್ಲೂ ಪ್ರಜಾಪ್ರಭುತ್ವಕ್ಕೆ ಒತ್ತು ನೀಡಲಾಗಿತ್ತು ಎಂದರು.



ಇತ್ತೀಚೆಗೆ ಮತಗಳ್ಳತನ ನಡೆಯುತ್ತಿದೆ. ನನ್ನ ಮತ ನನ್ನ ಹಕ್ಕಿಗಾಗಿ ಹೋರಾಟ ಮಾಡಬೇಕು ಎಂಬ ಪರಿಸ್ಥಿತಿ ಎದುರಾಗಿದೆ. ಸಂವಿಧಾನ, ಪ್ರಜಾಪ್ರಭುತ್ವ ಉಳಿಸುವುದು ಪ್ರತಿಯೊಬ್ಬರ ಕರ್ತವ್ಯ ಮತ್ತು ಅನಿವಾರ್ಯವಾಗಿದೆ ಎಂದರು. ಸಂವಿಧಾನದಲ್ಲಿ ಯಾವ ಜಾತಿ ಧರ್ಮಕ್ಕೂ ಮೇಲು-ಕೀಳು ಎಂಬ ತಾರತಮ್ಯ ಇಲ್ಲ. ಜಾತಿ, ಧರ್ಮ ಹಾಗೂ ಲಿಂಗ ಬೇಧವಿಲ್ಲದೇ ಎಲ್ಲರಿಗೂ ಪ್ರಜಾಪ್ರಭುತ್ವದಲ್ಲಿ ಸಮಾನ ಅವಕಾಶಗಳಿವೆ. ಸಾಮಾಜಿಕ ಅಸಮಾನತೆ ನಿವಾರಣೆಯಾಗಬೇಕು. ಪ್ರತಿಯೊಬ್ಬರಿಗೂ ಆರ್ಥಿಕ ಹಾಗೂ ಸಾಮಾಜಿಕ ಸಮಾನತೆ ದೊರೆಯಬೇಕು. ಜಾತಿಬೇಧ ಮಾಡಬಾರದು. ಧರ್ಮ ಸಹಿಷ್ಣುತೆ ಇರಬೇಕೆಂದು ಹೇಳಿದರು.

ವಿರೋಧ ಪಕ್ಷಗಳಿಗೆ ರಾಜಕೀಯ ಮಾಡಲು ಬೇರೆ ವಿಷಯಗಳೇ ಇಲ್ಲ. ಧರ್ಮದ ಹೆಸರಿನಲ್ಲೇ ರಾಜಕೀಯ ಮಾಡುತ್ತಿದ್ದಾರೆ. ಬಾನು ಮುಷ್ತಾಕ್ ದಸರಾ ಉದ್ಘಾಟಿಸಬಾರದೆಂದು ವಿರೋಧ ವ್ಯಕ್ತಪಡಿಸಲಾಗಿದೆ. ನಾವು ಯಾವ ವ್ಯವಸ್ಥೆಯಲ್ಲಿದ್ದೇವೆ ಎಂದೇ ಅರ್ಥವಾಗುತ್ತಿಲ್ಲ. ಸಂವಿಧಾನ ಧರ್ಮ ತಾರತಮ್ಯಕ್ಕೆ ಅವಕಾಶ ನೀಡುವುದಿಲ್ಲ. ಸ್ವಾತಂತ್ರ್ಯ ಬಂದು ಇಷ್ಟೂ ವರ್ಷಗಳಾದರೂ ಪಟ್ಟಭದ್ರ ಹಿತಾಸಕ್ತಿಗಳು ಸಂವಿಧಾನಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿವೆ. ಮಾಜಿ ಸಂಸದನೊಬ್ಬ ಸಂವಿಧಾನ ಓದದೆ ಮೂರ್ಖನಂತೆ ನಡೆದುಕೊಳ್ಳುತ್ತಾನೆ ಎಂದು ಏಕ ವಚನದಲ್ಲಿ ವಾಗ್ದಾಳಿ ನಡೆಸಿದರು. ಚರ್ಚೆಯೇ ಪ್ರಜಾಪ್ರಭುತ್ವದ ಜೀವಾಳ. ಆದರೆ ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನ ಖಂಡನೀಯವಾಗಿದೆ. ಇತ್ತೀಚಿನ ದಿನಗಳಲ್ಲಿ ವಿರೋಧ ಪಕ್ಷಗಳು ಈ ಪ್ರಯತ್ನವನ್ನು ಹೆಚ್ಚು ಮಾಡುತ್ತಿವೆ. ಜನ ಜಾಗೃತರಾಗಬೇಕು ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಸರ್ವರಿಗೂ ಸಮಬಾಳು, ಸಮಪಾಲು ಎಂಬ ಆಶ್ರಯ ನಾಡಿನ ಅನುಭವ ಮಂಟಪದಿಂದ ಕೇಳಿ ಬಂತು. ಇದು ವಿಶ್ವಕ್ಕೆ ಮಾದರಿಯಾಗಿದೆ ಎಂದರು. ಮತದಾನ ಸಾಮಾನ್ಯರನ್ನು ಆಡಳಿತ ವ್ಯವಸ್ಥೆಯಲ್ಲಿ ಕೂರಿಸಿದೆ. ಮಹಾರಾಜರು ಮನೆಯಲ್ಲಿದ್ದಾರೆ. ತಮ ಕಾಲದಲ್ಲಿ ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘಗಳಿಗೆ ಚುನಾವಣಾ ವ್ಯವಸ್ಥೆ ಇತ್ತು. ಆನಂತರ ಸರ್ಕಾರ ಅದನ್ನು ರದ್ದು ಮಾಡಿದೆ. ಪಂಚಾಯಿತಿಯಿಂದ ಪಾರ್ಲಿಮೆಂಟ್‌ವರೆಗೂ ನಾಯಕತ್ವವನ್ನು ಬೆಳೆಸಬೇಕೆಂದರು. ತಾವು 7ನೇ ತರಗತಿಯಲ್ಲಿರ ಬೇಕಾದರೆ, ವಿದ್ಯಾರ್ಥಿ ಸಂಘದ ಚುನಾವಣೆಗೆ ಸ್ಪರ್ಧಿಸಿದೆ. ಆಗ ನನ್ನ ಚಿಹ್ನೆ ಸ್ಟಾರ್ ಆಗಿತ್ತು. ನಾನು ಸಿದ್ದರಾಮಯ್ಯ ಸೇರಿದಂತೆ ಎಲ್ಲರೂ ಪ್ರಜಾಪ್ರಭುತ್ವ ಮತದಾನದಿಂದಾಗಿಯೇ ಇಲ್ಲಿ ಇದ್ದೇವೆ.

ಪ್ರತಿಯೊಂದು ಮತಕ್ಕೂ ಅಮೂಲ್ಯವಾದ ಸ್ಥಾನಮಾನವಿದೆ. ಕಾಂಗ್ರೆಸ್‌ನ ಧ್ರುವನಾರಾಯಣ್ ಒಂದು ಮತ ಅಂತರದಲ್ಲಿ ಗೆಲುವು ಸಾಧಿಸಿ ಶಾಸಕರಾದರು. ಅವರ ಎದುರು ಸ್ಪರ್ಧಿಸಿದ್ದ ಎ.ಆರ್.ಕೃಷ್ಣಾಮೂರ್ತಿಯವರ ಚಾಲಕ ತಡವಾಯಿತು ಎಂದು ಮತ ಹಾಕಲಿಲ್ಲ, ಅಂದು ಅವರ ಕುಟುಂಬದ ಮೂವರು ಸದಸ್ಯರು ಬಂದು ಮತ ಹಾಕಿದರೆ, ಫಲಿತಾಂಶ ಬೇರೆಯಾಗುತ್ತಿತ್ತು ಎಂದರು. ರಾಜಸ್ಥಾನದಲ್ಲಿ ಸಿ.ಪಿ. ಜೋಶಿ ಎರಡು ಮತಗಳ ಅಂತರದಲ್ಲಿ ಸೋಲು ಕಂಡು ಮುಖ್ಯಮಂತ್ರಿಯಾಗುವ ಅವಕಾಶ ತಪ್ಪಿಸಿಕೊಂಡರು. ಹೀಗಾಗಿ ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕು ಎಂದು ಮನವಿ ಮಾಡಿದರು.

## ಬಿಜೆಪಿ ನಾಯಕರಿಂದಲೇ ಮತಯಂತ್ರಗಳಿಗೆ ವಿರೋಧ :ಪ್ರಿಯಾಂಕ್ ಖರ್ಗೆ



ಬೆಂಗಳೂರು, ಸೆ.8- ಸ್ಥಳೀಯ ಸಂಸ್ಥೆಗಳಲ್ಲಿ ಮತಯಂತ್ರಗಳ ಬದಲಿಗೆ, ಮತಪತ್ರಗಳನ್ನು ಬಳಕೆ ಮಾಡಲು ನಿರ್ಧರಿಸಿರುವ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಬಿಜೆಪಿ ನಾಯಕರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.

ಬಿಜೆಪಿಯ ಡಬಲ್ ಸ್ಟ್ಯಾಂಡರ್ಡ್ ರಾಜಕೀಯಕ್ಕೆ ಮಿತಿ ಇಲ್ಲ, ಕೊನೆ ಇಲ್ಲ. ಬ್ಯಾಲೆಟ್ ಪೇಪರ್ ಮಾದರಿಯ ಚುನಾವಣಾ ಕ್ರಮವನ್ನು ವಿರೋಧಿಸುತ್ತಿರುವ ಬಿಜೆಪಿಯೇ ಹಿಂದೆ ಇವಿಎಂ ವಿರೋಧಿಸಿ ಬ್ಯಾಲೆಟ್ ಪೇಪರ್ ಪರ ವಹಿಸಿತ್ತು ಎಂಬ ವಿಷಯವನ್ನು ಮರೆತಿರುವಂತಿದೆ.

ಬಿಜೆಪಿಗರಿಗೆ ಇರುವುದು ಬರೀ ಮರೆವಲ್ಲ, ಜಾಣ ಮರೆವು. ಬಿಜೆಪಿಯ ಮುಖಂಡರಾದ ಸುಬ್ರಮಣ್ಯಸ್ವಾಮಿ ಮತ್ತು ಕಲ್ಯಾಣ-ರಾಮನ್, ಇವಿಎಂ ಯಂತ್ರಗಳು ಸಂವಿಧಾನ ವಿರೋಧಿ ಮಾತ್ರವಲ್ಲ ದುರ್ಬಳಕೆಗೆ ದಾರಿ ಮಾಡಿಕೊಡುತ್ತವೆ ಎಂದು ಪುಸ್ತಕ ಬರೆದಿದ್ದರು. ಬಿಜೆಪಿಯ ರಾಜ್ಯಸಭೆ ಮಾಜಿ ಸದಸ್ಯ ಹಾಗೂ ವಕ್ತಾರ ಜಿ.ವಿ.ಎಲ್.ನರಸಿಂಹರಾವ್, ಇವಿಎಂಗಳು ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ-ಡೆಮಾಕ್ರಸಿ ಅಟ್ ರಿಸ್ಕ್ ಎಂಬ ಪುಸ್ತಕ ಬರೆದಿದ್ದರು.

ಪುಸ್ತಕ ಇವಿಎಂಗಳನ್ನು ಕಟುವಾಗಿ ವಿರೋಧಿಸಿದ ಬಿಜೆಪಿಯ ಉನ್ನತ ನಾಯಕ ಎಲ್.ಕೆ.ಅಡ್ವಾಣಿ ಡೆಮಾಕ್ರಸಿ ಅಟ್ ರಿಸ್ಕ್ ಪುಸ್ತಕಕ್ಕೆ ಮುನ್ನುಡಿ ಬರೆದಿದ್ದರು. ಈ ಎಲ್ಲಾ ವಿಚಾರಗಳನ್ನು ಬಿಜೆಪಿ ನಾಯಕರಿಗೆ ನೆನಪಿಸಲು ಬಯಸುತ್ತೇನೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಇವಿಎಂ ಕುರಿತು ಬಿಜೆಪಿ ನಾಯಕರಿಗೆ ಹುಟ್ಟಿದ ಈ ಅನುಮಾನಗಳನ್ನು ಬಗೆಹರಿಸುವ ಸಲುವಾಗಿಯೇ ಜಗತ್ತಿನ ನಾಲ್ಕನೇ ತಂತ್ರಜ್ಞಾನದ ಕೇಂದ್ರವೆನಿಸಿಕೊಂಡಿರುವ ಬೆಂಗಳೂ-ರಿನಲ್ಲಿ ಎಥಿಕಲ್‌ಇವಿಎಂ ಹ್ಯಾಕಥಾನ್ ನಡೆಸುವಂತೆ ಚುನಾವಣಾ ಆಯೋಗಕ್ಕೆ ಈ ಹಿಂದೆ ನಾನು ಪತ್ರ ಬರೆದಿದ್ದೆ. ಇದುವರೆಗೂ ನನ್ನ ಪತ್ರಕ್ಕೆ ಆಯೋಗ ಉತ್ತರ ನೀಡಿಲ್ಲ. ಎಥಿಕಲ್ ಹ್ಯಾಕಥಾನ್ ನಡೆಸುವ ಧೈರ್ಯವನ್ನೂ ತೋರಿಸಿಲ್ಲ ಏಕೆ ಎಂದು ಪ್ರಶ್ನಿಸಿದ್ದಾರೆ.

ಇದು ಚುನಾವಣಾ ಆಯೋಗದ ವಿಶ್ವಾಸಾರ್ಹತೆಯ ಪ್ರಶ್ನೆಯೋ ? ಇವಿಎಂಗಳ ಬಗೆಗಿನ ಅವಿಶ್ವಾಸವೊ ? ಚುನಾವಣಾ ಆಯೋಗದ ವಕ್ತಾರರಾದ ಬಿಜೆಪಿಯವರು ಉತ್ತರ ನೀಡುವರೇ? ಮುಂದುವರೆದ ರಾಷ್ಟ್ರಗಳು ಇವಿಎಂ ಬಿಟ್ಟು ಬ್ಯಾಲೆಟ್ ಮಾದರಿಯ ಚುನಾವಣೆಗೆ ಮರಳಿರುವಾಗ ರಾಜ್ಯದ ಬಿಜೆಪಿ ನಾಯಕರಿಗೇಕೆ ಬ್ಯಾಲೆಟ್ ಬಗ್ಗೆ ಅಸಹನೆ? ಅಪನಂಬಿಕೆ ಎಂದು ಕಿಡಿಕಾರಿದ್ದಾರೆ.

## ಬೆಂಗಳೂರಲ್ಲಿ ಸರಗಳ್ಳರ ಅಟ್ಟಹಾಸ :ಲಾಂಗ್‌ನಿಂದ ಬೆದರಿಸಿ ಸರ ಅಪಹರಣ, ಮಹಿಳೆಯ ಬೆರಳು ಕಟ್



ಬೆಂಗಳೂರು: ನಗರದಲ್ಲಿ ಇಬ್ಬರು ದರೋಡೆಕೋರರು ಬೈಕ್‌ನಲ್ಲಿ ಸುತ್ತಾಡುತ್ತಾ ಇಬ್ಬರು ಮಹಿಳೆಯರಿಗೆ ಲಾಂಗ್‌ನಿಂದ ಬೆದರಿಸಿ ಎರಡು ಸರಗಳನ್ನು ಕಿತ್ತುಕೊಂಡಿದ್ದು, ಆ ವೇಳೆ ಪ್ರತಿರೋಧವೊಡ್ಡಿದ ಮಹಿಳೆಯ ಕೈ ಬೆರಳು ತುಂಡರಿಸಿರುವ ಘಟನೆ ಗಿರಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಈಶ್ವರಿ ನಗರದಲ್ಲಿ ಪ್ರತಿಷ್ಠಾಪಿಸಿದ್ದ ಗಣೇಶಮೂರ್ತಿ ಸ್ಥಳದಲ್ಲಿ ಮೊನ್ನೆ ರಾತ್ರಿ ಆರ್ಕೆಸ್ಟ್ರಾ ಆಯೋಜಿ ಸಲಾಗಿತ್ತು. ಹಾಗಾಗಿ ಕಾರ್ಯಕ್ರಮ ವೀಕ್ಷಿಸಲು ಸ್ಥಳೀಯ ನಿವಾಸಿಗಳಾದ ಉಷಾ ಮತ್ತು ವರಲಕ್ಷ್ಮೀ ಹೋಗಿದ್ದಾರೆ. ಕಾರ್ಯಕ್ರಮ ವೀಕ್ಷಿಸಿ ಅಂ-ದು ರಾತ್ರಿ ಇವರಿಬ್ಬರು ಮನೆಗೆ ವಾಪಸ್ ನಡೆದುಕೊಂಡು ಹೋಗುತ್ತಿದ್ದರು. ಆ ವೇಳೆ ಇಬ್ಬರು ದರೋಡೆಕೋರರು ಬೈಕ್‌ನಲ್ಲಿ ಹಿಂಬಾಲಿಸಿಕೊಂಡು ಬಂದು ಒಬ್ಬರ ಕುತ್ತಿಗೆಗೆ ಲಾಂಗ್ ಇಟ್ಟು ಸರ ಬಿಚ್ಚಿಕೊಡುವಂತೆ ಬೆದ-ರಿಸಿದ್ದಾರೆ. ಇದರಿಂದ ಗಾಬರಿಗೊಂಡ ಒಬ್ಬರು ಭಯದಲ್ಲಿ ಚಿನ್ನದ ಸರ ತೆಗೆದುಕೊಟ್ಟಿದ್ದಾರೆ.

ಇವರ ಜೊತೆಯಲ್ಲಿದ್ದ ಮತ್ತೊಬ್ಬರು ಪ್ರತಿರೋಧ ಒಡ್ಡಿದಾಗ ಲಾಂಗ್‌ನಿಂದ ಆಕೆಯ ಬೆರಳು ತುಂಡಾಗಿದೆ. ಆದರೂ ಸಹ ಬಿಡದೆ ದರೋಡೆಕೋರರು ಆಕೆಯ ಚಿನ್ನದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದಾರೆ. ದರೋಡೆಕೋರರ ಕೃತ್ಯಕ್ಕೆ ಮಹಿಳೆಯರು ಆತಂಕಗೊಂಡಿದ್ದಾರೆ. ಉಷಾ ಅವರ 10 ಗ್ರಾಂ ಸರ ಹಾಗೂ ವರಲಕ್ಷ್ಮಿ ಅವರ 45 ಗ್ರಾಂ ಸರವನ್ನು ದರೋಡೆಕೋರರು ಸುಲಿಗೆ ಮಾಡಿದ್ದು, ಈ ಬಗ್ಗೆ ಗಿರಿನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಇದಲ್ಲದೇ ಈ ಇಬ್ಬರು ದರೋಡೆಕೋರರು ಗಿರಿನಗರ, ಇಂದಿರಾ ನಗರ, ಕೊತ್ತನೂರು, ಕೋಣನಕುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲೂ ಲಾಂಗ್‌ನಿಂದ ಬೆದರಿಸಿ ಮೊಬೈಲ್, ಚಿನ್ನದ ಸರಗಳನ್ನು ಎಗರಿಸಿರುವ ಬಗ್ಗೆ ಪೊಲೀಸ್ ಠಾಣೆಗಳಲ್ಲಿ ದೂರು ದಾಖಲಾಗಿವೆ.

## ವಕ್ಫ್ ತಿದ್ದುಪಡಿ ಕಾಯ್ದೆಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ನಕಾರ

ನವದೆಹಲಿ: ದೇಶಾದ್ಯಂತ ಭಾರೀ ವಿವಾದ ಸೃಷ್ಟಿಸಿದ್ದ ವಕ್ಫ್ ತಿದ್ದುಪಡಿ ಕಾಯ್ದೆ -2025ಕ್ಕೆ ಸಾಂವಿಧಾನಿಕ ಸಿಂಧುತ್ವ ನೀಡಿರುವುದಕ್ಕೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಆದರೆ ಕಾಯ್ದೆಯಲ್ಲಿನ ಕೆಲವು ನಿಬಂಧನೆಗಳಿಗೆ ತಡೆಯಾಜ್ಞೆ ಕೊಟ್ಟಿರುವ ಸರ್ವೋಚ್ಚ ನ್ಯಾಯಾಲಯ ಪೂರ್ಣ ಪ್ರಮಾಣದ ಆದೇಶವನ್ನು ನೀಡಿಲ್ಲ.

ಸಂಪೂರ್ಣ ಕಾನೂನಿಗೆ ತಡೆ ನೀಡಲು ಯಾವುದೇ ಆಧಾರವಿಲ್ಲ ಎಂದು ಅದು ಹೇಳಿದೆ. ಕೆಲವು ವಿಭಾಗಗಳ ಬಗ್ಗೆ ವಿವಾದವಿದೆ. ನ್ಯಾಯಾಲಯವು ಇದರ ಬಗ್ಗೆ ಮತ್ತಷ್ಟು ವಿಚಾರಣೆ ನಡೆಸುತ್ತಿದೆ. ಸಾಧ್ಯವಾದಷ್ಟು ಮಟ್ಟಿಗೆ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಸ್ಲಿಮರಾಗಿರಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ.

ನ್ಯಾಯಾಲಯ ತಡೆಹಿಡಿದಿರುವ ನಿಬಂಧನೆಗಳಲ್ಲಿ ಮೊದಲನೆಯದು, ಜಿಲ್ಲಾಧಿಕಾ-ರಿಗೆ ಆಸ್ತಿಯನ್ನು ವಕ್?ಫ ಆಗಿ ಗುರುತಿಸುವ ಅಧಿಕಾರ ನೀಡುವ ಅಂಶ. ಇದು ಅಧಿಕಾರಗಳ ಪ್ರತ್ಯೇಕತೆಯ ತತ್ವವನ್ನು ಉಲ್ಲಂಘಿಸುತ್ತದೆ.ಎರಡನೆಯದು ವಕ್ಫ್ ರಚಿಸಲು ವ್ಯಕ್ತಿಯು ಕನಿಷ್ಠ ಐದು ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಅನುಸರಿಸಿದ್ದಿರಬೇಕು ಎಂಬ ಷರತ್ತು. ಈ ಕುರಿತಂತೆ ರಾಜ್ಯ ಸರ್ಕಾರಗಳು ನಿಯಮಗಳನ್ನು ರೂಪಿಸುವವರೆ ಈ ನಿಯಮ ಜಾ-ರಿಗೊಳಿಸಬಾರದು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ.

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಹಾಗೂ ಎ.ಜಿ.ಮಸೀಹ್ ಅವರಿದ್ದ ದ್ವಿಸದಸ್ಯ ಪೀಠವು, ಕಳೆದ ಮೇ 22 ರಂದು ಕಾಯ್ದಿರಿಸಿದ್ದ ಆದ-ೇಶವನ್ನು ಪ್ರಕಟಿಸಿತು.

ರಾಜ್ಯ ವಕ್ಫ ಮಂಡಳಿ ಮತ್ತು ಕೇಂದ್ರ ವಕ್ಫ್ ಮಂಡಳಿಗಳಲ್ಲಿ ಮುಸ್ಲಿಮೇತರ ಸಂಖ್ಯೆ ಮೂರು ಇರಬಾರದೆಂದು ಹೇಳಿರುವ ನ್ಯಾಯಾಲಯ, ವಕ್ಫ್ ಮಂಡಳಿಯ ಸದಸ್ಯರಾಗಲು ಕನಿಷ್ಠ 5 ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಅನುಸರಿಸುವ ಷರತ್ತು ವಿಧಿಸಿದ ನಿಬಂಧನೆಯನ್ನು ತಡೆ ಹಿಡಿಯಲಾಗಿದೆ.




ಸರಿಯಾದ ನಿಯಮಗಳನ್ನು ರೂಪಿಸುವವರಿಗೆ ಈ ನಿಬಂಧನೆಯನ್ನು ಜಾ-ರಿಗೆ ತರಲಾಗುವುದಿಲ್ಲ. ಇದಲ್ಲದೆ ಸೆಕ್ಷನ್ 3(74)ಗೆ ಸಂಬಂಧಿಸಿದ ಕಂದಾಯ ದಾಖಲೆಗಳ ಒದಗಿಸುವಿಕೆಯನ್ನು ಸಹ ತಡೆ ಹಿಡಿದಿದೆ.

ಅಲ್ಲದೆ, ಮುಸ್ಲಿಮೇತರರನ್ನು ಸಿಇಒ ಆಗಿ ನೇಮಿಸುವ ಕುರಿತ ತಿದ್ದುಪಡಿಗೆ ತಡೆ ನೀಡಲು ನ್ಯಾಯಾಲಯ ನಿರಾಕರಿಸಿದೆ. ಅಂದರೆ, ವಕ್ಫ್ ಮಂಡಳಿಯ ಅಧ್ಯಕ್ಷರು ಮುಸ್ಲಿಂ ಅಥವಾ ಹಿಂದೂಗಳಲ್ಲದವರಾಗಬೇಕೆಂಬ ಬಗ್ಗೆ ಪರಿಸ್ಥಿತಿ ಇನ್ನೂ ಸಂಪೂರ್ಣವಾಗಿ ಸ್ಪಷ್ಟವಾಗಿಲ್ಲ. ಸಾಧ್ಯವಾದರೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಸ್ಲಿಮರಾಗಿರಬೇಕು ಎಂದು ಸುಪ್ರೀಂಕೋರ್ಟ್ ಸೂಚಿಸಿದೆ.

ಈ ತೀರ್ಪಿನ ಪ್ರಮುಖ ಅಂಶಗಳು

ವಕ್?ಫ ರಚಿಸಲು ಒಬ್ಬ ವ್ಯಕ್ತಿ 5 ವರ್ಷಗಳ ಕಾಲ ಇಸ್ಲಾಂ ಧರ್ಮದ ಅನುಯಾಯಿಯಾಗಿರಬೇಕು ಎಂದು ಹೇಳುವ ವಕ್‌ಫ ತಿದ್ದುಪಡಿ ಕಾಯ್ದೆ 2025ರ ನಿಬಂಧನೆಯನ್ನು ಸುಪ್ರೀಂಕೋರ್ಟ್ ತಡೆಹಿಡಿದಿದೆ. ಒಬ್ಬ ವ್ಯಕ್ತಿಯು ಇಸ್ಲಾಂ ಧರ್ಮದ ಅನುಯಾಯಿಯೇ ಅಥವಾ ಇಲ್ಲವೇ ಎಂಬುದನ್ನು ನಿರ್ಧರಿಸಲು ರಾಜ್ಯ ಸರ್ಕಾರಗಳು ನಿಯಮಗಳನ್ನು ರೂಪಿಸುವವರೆಗೆ ಈ ನಿಬಂಧನೆಯನ್ನು ಅಮಾನತುಗೊಳಿಸಲಾಗಿದೆ.

ಕಲೆಕ್ಟರ್ ಹಕ್ಕುಗಳ ಕುರಿತು

ಕಲೆಕ್ಟರ್ ಹಕ್ಕುಗಳ ಕುರಿತು ಸುಪ್ರೀಂಕೋರ್ಟ್ ತನ್ನ ನಿರ್ಧಾರವು ಅಂತಿಮ ನಿರ್ಧಾರವಾಗುವುದಿಲ್ಲ ಎಂದು ಹೇಳಿದೆ. ಈ ಪ್ರಕರಣದಲ್ಲಿ, ಸುಪ್ರೀಂಕೋರ್ಟ್ ಮುಸ್ಲಿಂ ಕಡೆಯ ವಾದವನ್ನು ಒಪ್ಪಿಕೊಂಡಿತು. ಈ ರೀತಿಯಾಗಿ, ಇದು ಮುಸ್ಲಿಂ ಕಡೆಯವರಿಗೆ ಸಮಾಧಾನಕರ ವಿಷಯವಾಗಿದೆ.

ಯಾವುದೇ ಕಾನೂನಿನ ಸಾಂವಿಧಾನಿಕತೆಯ ಪರವಾಗಿ ಯಾವಾಗಲೂ ಊಹೆ ಇರುತ್ತದೆ ಮತ್ತು ಬಹಳ ಅಪರೂಪದ ಸಂದರ್ಭಗಳಲ್ಲಿ ಮಾತ್ರ ಹಸ್ತಕ್ಷೇಪ ಮಾಡಬಹುದು ಎಂಬುದನ್ನು ನಾವು ಒಪ್ಪಿಕೊಂಡಿದ್ದೇವೆ ಎಂದು ಸಿಜೆಐ ಹೇಳಿದರು. ಪ್ರತಿಯೊಂದು ವಿಭಾಗಕ್ಕೂ ಪ್ರಾಥಮಿಕ ಸವಾಲನ್ನು ನಾವು ಪರಿಗಣಿಸಿದ್ದೇವೆ. ಇಡೀ ಕಾಯ್ದೆಯ ನಿಬಂಧನೆಗಳನ್ನು ತಡೆಯಲು ಯಾವುದೇ ಆಧಾರವಿಲ್ಲ ಎಂದು ನಾವು ಕಂಡುಕೊಂಡಿದ್ದೇವೆ. ಆದರೆ ಕೆಲವು ವಿಭಾಗಗಳಿಗೆ ರಕ್ಷಣೆ ಬೇಕು ಎಂದಿದ್ದಾರೆ.

ಸೆಕ್ಷನ್ 3 (ಆರ್) ಕುರಿತು ಸುಪ್ರೀಂಕೋರ್ಟ್

ಈ ನಿಬಂಧನೆಯು ವ್ಯಕ್ತಿಯು 5 ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಅನುಸರಿಸಬೇಕು ಎಂಬ ಷರತ್ತನ್ನು ವಿಧಿಸುತ್ತದೆ. ಯಾವುದೇ ಕಾರ್ಯವಿಧಾನವಿಲ್ಲದೆ, ಈ ನಿಬಂಧನೆಯು ಅನಿಯಂತ್ರಿತ ಅಧಿಕಾರಗಳ ವ್ಯಾಯಾಮಕ್ಕೆ ಕಾರಣವಾಗುತ್ತದೆ, ಆದ್ದರಿಂದ ಅದನ್ನು ತಡೆಹಿಡಿಯಲಾಗಿದೆ.

ಡಿಜಿಟಲ್ ವಾರ್ತೆ

# ಶೋಷಣೆ ಮುಕ್ತ ಸಮಾಜ ನಿರ್ಮಾಣ ದಕ್ಷಿಣ ವಿಭಾಗದ ಪ್ರಾರಂಭೋತ್ಸವದ ಸಮಾರಂಭ

ಬೆಂಗಳೂರು: ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಬೆಂಗಳೂರು ಮಹಾನಗರ – ದಕ್ಷಿಣ ಭಾಗ, ಪ್ರಾರಂಭೋತ್ಸವದ ಸಮಾರಂಭವು ಬೆಂಗಳೂರಿನ ಬನಶಂಕರಿ 3ನೇ ಹಂತದ ಸ್ವಾಸ್ಥ ಟೆಕ್ನಾಲಜಿಸ್ ಭವನ್ ನಲ್ಲಿ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಕರ್ನಾಟಕ ಪ್ರಾಂತದ ಬೆಂಗಳೂರು ಮಹಾನಗರ–ದಕ್ಷಿಣ ಭಾಗದ ABGP ಅಭ್ಯಾಸ ವರ್ಗ –2025 ನಡೆಸಲಾಯಿತು.



ಈ ಅಭ್ಯಾಸ ವರ್ಗದ ಉದ್ಘಾಟನೆಯನ್ನು ಬಸವನಗುಡಿಯ ಶ್ರೀರಾಮಕೃಷ್ಣ ಮಠದ ಸ್ವಾಮಿ ಗಿರಿಜಾತ್ಮಾನಂದ ಮಹಾರಾಜ್ ಅವರು ದೀಪ ಬೆಳಗುವ ಮೂಲಕ ಉದ್ಘಾಟಿಸಿದರು. ನಂತರ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಗ್ರಾಹಕ ಮತ್ತು ವರ್ತಕರ ಮನೋಭಾವಗಳ ಬಗ್ಗೆ ತಿಳಿಸಿದರು, ಹಾಗೂ ಸಾಮಾನ್ಯವಾಗಿ ಮನುಷ್ಯನ ನಡವಳಿಕೆ ಹೇಗಿರುತ್ತದೆ, ಆದರೆ ಸರಿಯಾದ ಅದು ಹೇಗಿರಬೇಕು ಮನುಷ್ಯನ ಅಂತಿಮ ಗುರಿ ಏನು? ಸಾರ್ಥಕ ಬದುಕು ನಡೆಸುವುದು ಹೇಗೆ, ಎಂಬುದರ ಬಗ್ಗೆ ಅತಿ ಸೂಕ್ಷ್ಮವಾಗಿ ನೆರೆದಿದ್ದವರೆಲ್ಲರ ಮನ ಮುಟ್ಟುವ ಹಾಗೆ ವಿವರಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿಜಯ ಕಾಲೇಜ್ ಪ್ರೊಫೆಸರ್ ಹೆಚ್‌ಎಸ್ ರಾಮಕೃಷ್ಣ ಅವರು ಮಾತನಾಡುತ್ತಾ ಸಂಸ್ಕಾರಯುತವಾದ ಸಮಾಜವನ್ನು ಕಟ್ಟುವಲ್ಲಿ ಕಾರ್ಯಕರ್ತರು ಗಮನಹ–ರಿಸಿದರೆ ಬಹಳಷ್ಟು ಸಮಸ್ಯೆಗಳು ಬಗೆಹರಿಯಲು ಸಾಧ್ಯ ಹಾಗೂ ಸುಸ್ಥಿರ ಸಮಾಜವನ್ನು ಕಾಣಬಹುದು ಎಂದು ತಿಳಿಸಿದರು. ಹಾಗೂ ದೃಷ್ಟಿ ಮಾಂದ್ಯ ರಾಷ್ಟ್ರೀಯ ಸಂಸ್ಥೆ ಸಿಇಓ, ಡಾ.ಎಂ ಎಸ್ ರಾಜೇಶ್ ಅವರುಗಳು ತಮ್ಮ ವೈವಿಧ್ಯಮಯ ಭಾಷಣದಲ್ಲಿ ಮಾತನಾಡುತ್ತಾ ಗ್ರಾಹಕ ಪಂಚಾಯತ್ ಬೆಂಗಳೂರು ದಕ್ಷಿಣ ಭಾಗದಲ್ಲಿ ಕಾರ್ಯಕರ್ತರ ಪಡೆಯೊಂದಿಗೆ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ತಂಡವಾಗಿ ಕಾರ್ಯನಿರ್ವಹಿಸಲಿ ಎಂದು ತಿಳಿಸಿದರು.

ಬೆಂಗಳೂರು ದಕ್ಷಿಣ ಭಾಗದ ಅಧ್ಯಕ್ಷರಾದ ಶ್ರೀ ಕೃಷ್ಣ ಹೇರಳೆ ಅವರು ಎಲ್ಲರನ್ನು ಅಭ್ಯಾಸ ವರ್ಗಕ್ಕೆ ಸ್ವಾಗತಿಸಿದರು. ಬೆಂಗಳೂರು ಮಹಾನಗರದ ಕಾರ್ಯಾಧ್ಯಕ್ಷರಾದ ಜಿ ಗುರುಸ್ವಾಮಿ ಅವರು ಪ್ರಾಸ್ತಾವಿಕ ಭಾಷಣದಲ್ಲಿ "ಶೋಷಣೆ ಮುಕ್ತ ಸಮಾಜ ನಿರ್ಮಾಣ" ಎಂಬ ಸಂಕಲ್ಪದೊಂದಿಗೆ ಗ್ರಾಹಕ ಪಂಚಾಯತ್ ಸಮಾಜದ ಗ್ರಾಹಕರಲ್ಲಿ ಜಾಗೃತಿ ಮೂಡಿಸುವಲ್ಲಿ ಪಂಚಾಯಿತ್ ನ ಕಾರ್ಯಕರ್ತರು ನಿರಂತರವಾಗಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ ಹಾಗೂ ಹಲವಾರು ಗ್ರಾಹಕರು ಸಮಸ್ಯೆಗಳನ್ನು ಪರಿಹ–ರಿಸಿಕೊಳ್ಳುವಲ್ಲಿ ಸೂಕ್ತವಾದ ಮಾರ್ಗದರ್ಶನವನ್ನು ನೀಡಿ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡು ತ್ತಿದ್ದಾರೆ ಎಂದು ಆಯುಷ್ಮಾನ್ ಭಾರತ್ ಹೆಲ್ತ್ ಕಾರ್ಡನ್ನು ಆಸ್ಪತ್ರೆಯಲ್ಲಿ ತಿರಸ್ಕರಿಸಿದ್ದು ಮತ್ತು ಅಪಾರ್ಟ್ಮೆಂಟ್ ಕೊಂಡುಕೊಳ್ಳುವಾಗ ಮೋಸ ಹೋಗಿ ತೊಂದರೆಗೀಡಾದ ಗ್ರಾಹಕರಿಗೆ ಪರಿಹಾರ ಕೊಡಿಸುವಲ್ಲಿ ಯಶಸ್ವಿಯಾದ ಬಗ್ಗೆ ಸವಿವರವಾಗಿ ಸಭೆಗೆ ತಿಳಿಸಿದರು.

ಗ್ರಾಹಕ ಪಂಚಾಯತ್ ನಡೆದು ಬಂದ ಹಾದಿ ಹಾಗೂ ಗ್ರಾಹಕ ಪಂಚಾಯತ್ ಕಾರ್ಯ ಪದ್ಧತಿ ಬಗ್ಗೆ ದಕ್ಷಿಣ ಮಧ್ಯ ಕ್ಷೇತ್ರೀಯ ಸಂಘಟನಾ ಮಂತ್ರಿ ಶ್ರೀಯುತ ದತ್ತಾತ್ರೇಯ ನಾಡಿಗ್ ಅವರು ಸಭೆಗೆ ಮನದಟ್ಟು ಆಗುವ ಹಾಗೆ ತಿಳಿಸಿದರು ಶ್ರೀಮತಿ ವಿಜಯಲಕ್ಷ್ಮಿ ಅವರು ಮಾತನಾಡುತ್ತಾ, ಗ್ರಾಹಕರ ಸೇವೆಯಲ್ಲಿ ಕಾರ್ಯಕರ್ತರು ತೊಡಗಿಸಿಕೊಳ್ಳಲು ಗ್ರಾಹಕ ಪಂಚಾಯತ್ ನಲ್ಲಿ ಸಾಧ್ಯ ಅದರ ಸದುಪಯೋಗವನ್ನು ಪಡೆದು ಸಂಘಟನೆಯಲ್ಲಿ ಉತ್ತಮ ಕಾರ್ಯಕರ್ತರಾಗಿ ಬೆಳೆಯುತ್ತಾ ಸಂಘಟನೆಯನ್ನು ಬೆಳೆಸಬೇಕು ಎಂದು ತಿಳಿಸಿದರು. "ಕಾರ್ಯಕರ್ತ ನಿರ್ಮಾಣ" ಗ್ರಾಹಕ ಪಂಚಾಯಿತಿನ ಮುಖ್ಯ ಕಾರ್ಯಗಳಲ್ಲಿ ಒಂದು. ಅದರಂತೆ ಕಾರ್ಯಕರ್ತರಾಗಿ ಗ್ರಾಹಕ ಪಂಚಾಯತ್ ಸಂಘಟನೆಯಲ್ಲಿ ಹೇಗೆ ತೊಡಗಿಸಿಕೊಳ್ಳಬಹುದು.

ಉತ್ತಮ ವ್ಯಕ್ತಿತ್ವದಿಂದ ವ್ಯಕ್ತಿಯನ್ನು ಬೆಳೆಸಲು ಸಂಘಟನೆಯಲ್ಲಿ ಸಾಧ್ಯ ಎಂದು ಗ್ರಾಹಕ ಪಂಚಾಯಿತ್ ನ ಕಾರ್ಯಕರ್ತ–ರಿಗೆ ಕರೆ ನೀಡಿದರು. ಎಂಬುದನ್ನು ಸಂಘದ ಕುಟುಂಬ ಪ್ರಬೋಧನ ಪ್ರಾಂತ ಸಂಯೋಜಕರಾದ ಶ್ರೀಯುತ ವೆಂಕಟೇಶ ಹೆಗ್ಡೆ, ಅವರು ತಿಳಿಸಿಕೊಟ್ಟರು. ಅಭ್ಯಾಸ ವರ್ಗದ ಅಧ್ಯಕ್ಷತೆಯನ್ನು ಕರ್ನಾಟಕ ಪ್ರಾಂತದ ಅಧ್ಯಕ್ಷರಾದ ಸನ್ಮಾನ್ಯ ಪ್ರೊಫೆಸರ್ ನರಸಿಂಹ ನಕ್ಷತ್ರಿ ವಹಿಸಿಕೊಂಡಿದ್ದರು. ಅವರು ಅಧ್ಯಕ್ಷತೆಯ ಭಾಷಣದಲ್ಲಿ. ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ ಗ್ರಾಹಕ ಪಂಚಾಯತ್ ಗ್ರಾಹಕರಿಗೆ ನ್ಯಾಯ ಒದಗಿಸಲು ಸಿಪಾಯಿಗಳಂತೆ ಕಾರ್ಯ ಕ್ಷಮತೆಯನ್ನು ತೋ–ರಿರುವ ಕಾರ್ಯಕರ್ತರ ಬಗ್ಗೆ ಹೆಮ್ಮೆಪಟ್ಟರು. ಇದೇ ರೀತಿ ಬೆಂಗಳೂರು ದಕ್ಷಿಣ ಭಾಗದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಗ್ರಾಹಕರ ಸೇವೆಯಲ್ಲಿ ತೊಡಗಬೇಕೆಂದರು. ಸುಂದರ ಸಮಾರಂಭದಲ್ಲಿ ನೃತ್ಯಗಾರ್ತಿ ಕುಮಾರಿ ಚಿನ್ಮಯಿ ಪ್ರತಿಭೆ ಪ್ರದರ್ಶನದಿಂದ ಸಭಿಕರನ್ನು ರಂಜಿಸಿದರು.

ಗ್ರಾಹಕ ಪಂಚಾಯತ್ ಅಭ್ಯಾಸ ವರ್ಗದ ಕಾರ್ಯಕ್ರಮಕ್ಕೆ ಕಾರ್ಯಕರ್ತರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಕಾಡುಗೊಲ್ಲ ಯುವಸೇನೆ ಉದ್ಘಾಟನೆ ಹಾಗೂ ಪ್ರತಿಭಾಪುರಸ್ಕಾರ

ಪಾವಗಡದಲ್ಲಿ ಕಾಡುಗೊಲ್ಲ ಯುವಸೇನೆ ಸಂಘದ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭ ಯಶಸ್ವಿಯಾಗಿ ನೆರವೇರಿತು. ಎಸ್. ಎಸ್.ಕೆ ಸಮುದಾಯ ಭವನದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ 2024–25ನೇ ಸಾಲಿನ ಎಸ್.ಎಸ್. ಎಲ್.ಸಿ ಮತ್ತು ಪಿ.ಯು.ಸಿ ಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.



ಕಾರ್ಯಕ್ರಮದಲ್ಲಿ ಭಾಗವಹಿಸಿದ ಗಣ್ಯರು ವಿದ್ಯಾರ್ಥಿಗಳಿಗೆ ಮತ್ತು ಸಮುದಾಯಕ್ಕೆ ಮಹತ್ವದ ಸಂದೇಶಗಳನ್ನು ನೀಡಿದರು.

*ಶ್ರೀ ಶ್ರೀ ಶ್ರೀ ಡಾ. ಬಸವರಮಾನಂದ ಮಹಾಸ್ವಾಮಿಗಳು (ಪೀಠಾಧ್ಯಕ್ಷರು, ವನಕಲ್ಲು ಮಠ)
ಮಠಾಧೀಶರು ಮಾತನಾಡಿ* , ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸಿ ಉನ್ನತ ಸ್ಥಾನಗಳನ್ನು ಅಲಂಕರಿಸಬೇಕೆಂದು ಪ್ರೋತ್ಸಾಹಿಸಿದರು. ಸಮುದಾಯ ಮತ್ತು ಪೋಷಕರಿಗೆ ಹೆಮ್ಮೆ ತರುವಂತಹ ಸಾಧನೆಗಳನ್ನು ಮಾಡಬೇಕು ಎಂದು ಹಾರೈಸಿದರು.

ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ತಮ್ಮ ಆಶ್ರಮದಲ್ಲಿ ಉಚಿತ ಶಿಕ್ಷಣ ಮತ್ತು ಅಗತ್ಯ ಸೌಕರ್ಯಗಳನ್ನು ಒದಗಿಸುವುದಾಗಿ ಭರವಸೆ ನೀಡಿದರು.
ಸತ್ಯಭಾಮ ಐಎಎಸ್ (ವ್ಯವಸ್ಥಾಪಕರು, ನಿರ್ದೇಶಕರು) ಮಾತನಾಡಿ,* ಸಮುದಾಯದ ವಿದ್ಯಾರ್ಥಿಗಳು ಮೂಢನಂಬಿಕೆಗಳಿಗೆ ಬಲಿಯಾಗದೆ, ಹೆಚ್ಚು ವಿದ್ಯಾಭ್ಯಾಸ ಮಾಡಿ ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು. ವಿದ್ಯಾರ್ಥಿನಿಯರು ತಮ್ಮ ಕನಸುಗಳನ್ನು ನನಸು ಮಾಡಿಕೊಳ್ಳಲು, 18 ವರ್ಷ ತುಂಬಿದ ನಂತರವೇ ಮದುವೆಯಾಗಬೇಕೆಂದು ವಿಶೇಷವಾಗಿ ಕಿವಿಮಾತು ಹೇಳಿದರು. ಶಿಕ್ಷಣದಿಂದ ಕೇವಲ ಕುಟುಂಬ ಮಾತ್ರವಲ್ಲದೆ, ಇಡೀ ರಾಜ್ಯ ಮತ್ತು ದೇಶವು ಅಭಿವೃದ್ಧಿ ಹೊಂದುತ್ತದೆ ಎಂದು ತಿಳಿಸಿದರು.

ಗುಂಡಮಲೆ ತಿಪ್ಪೇಸ್ವಾಮಿ (ಮಾಜಿ ವಿಧಾನ ಪರಿಷತ್ ಸದಸ್ಯರು, ಆಂಧ್ರ ಪ್ರದೇಶ)*
ಮಾಜಿ ಸದಸ್ಯರು ಮಾತನಾಡಿ ವಿದ್ಯಾರ್ಥಿಗಳು ಉತ್ತಮ ವಿದ್ಯಾಭ್ಯಾಸ ಮಾಡಿ ಉತ್ತಮ ಜೀವನ ನಿರ್ಮಾಣ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು. ಅಲ್ಲದೆ, ಪೋಷಕ–ರಿಗೆ "ಮಕ್ಕಳಿಗಾಗಿ ಆಸ್ತಿ ಮಾಡಬೇಡಿ, ಮಕ್ಕಳನ್ನೇ ಆಸ್ತಿಯಾಗಿ ಮಾಡಿ" ಎಂಬ ಮಹತ್ವದ ಸಂದೇಶ ನೀಡಿದರು.
*ಮಾಜಿ ಶಾಸಕರು ತಿಮ್ಮರಾಯಪ್ಪ ಮಾತನಾಡಿ* ವಿದ್ಯಾರ್ಥಿಗಳು ಅಂಕಗಳ ಮೂಲಕ ತಮ್ಮ ಪ್ರತಿಭೆಯನ್ನು ಗುರುತಿಸಿಕೊಂಡಿರುವುದಕ್ಕೆ ಸಂತೋಷ ವ್ಯಕ್ತಪಡಿಸಿದರು. ಸಮುದಾಯದವರಿಗೆ ಹೆಚ್ಚು ಮೂಲಭೂತ ಸೌಕರ್ಯಗಳನ್ನು ನೀಡಿ ಅವರನ್ನು ಮುಖ್ಯವಾಹಿನಿಗೆ ತರಬೇಕು ಎಂದು ಒತ್ತಾಯಿಸಿದರು.
ಈ ಕಾರ್ಯಕ್ರಮದಲ್ಲಿ ಜೆ.ಕೆ ಕೃಷ್ಣಮೂರ್ತಿ ಬೆಸ್ತರಹಳ್ಳಿ, ಯಾದವ ಸಂಘದ ಅಧ್ಯಕ್ಷ ನರಸಿಂಹಪ್ಪ, ಚಂದ್ರಶೇಖರ್ ಸಬ್ ಇನ್ಸೆಕ್ಟರ್, ವಿನೋದ್ ಸಿ ಡಿ ಪಿ ಓ ಕೋಲಾರ, ಸಣ್ಣ ನಾಗಪ್ಪ ಕೆಪಿಸಿಸಿ, ಸಂಘದ ಅಧ್ಯಕ್ಷ ದಿವ್ಯತೇಜ್, ಸಂಘದ ಕಾರ್ಯದರ್ಶಿ ರಾಜಣ್ಣ, ದೊಡ್ಡಯ್ಯ ದೊಡ್ಡಹಟ್ಟಿ, ಬಿ.ನಾಗೇಶ್, ನವೀನ್.ಸಿ, ಆನಂದ್, ನಾಗೇಂದ್ರ, ನಾಗರಾಜು ದೇವರಹಟ್ಟಿ, ಕೃಷಿ ಇಲಾಖೆ ಈರಣ್ಣ, ನಾಗಣ್ಣ ಕೃಷ್ಣಗಿರಿ ಶಿವಕುಮಾರ್, ಇನ್ನೂ ಸಂಘದ ಪದಾಧಿಕಾ–ರಿಗಳು ಮತ್ತು ಸಮುದಾಯದವರು ಭಾಗವಹಿಸಿದ್ದರು.

# ಗಣೇಶೋತ್ಸವ ಪ್ರಸಾದ 15 ಕೆಜಿ ಲಡ್ಡು 5.50 ಲಕ್ಷಕ್ಕೆ ಹರಾಜು

ಪೀಣ್ಯದಾಸರಹಳ್ಳಿ: ದಾಸರಹಳ್ಳಿ ಸಾಮೂಹಿಕ ಗಣೇಶೋತ್ಸವ ಸಮಿತಿ ವತಿಯಿಂದ ಹತ್ತನೇ ವರ್ಷದ ಗಣೇಶೋತ್ಸವದಲ್ಲಿ 18 ಅಡಿ ಎತ್ತರದ ಗಣೇಶ ಮೂರ್ತಿಯ ಪ್ರಸಾದವಾದ 15 ಕೆ.ಜಿ. ಲಡ್ಡು ಜೊತೆಗೆ ಕಾಲು ಕೆಜಿ ಬೆಳ್ಳಿಯ ಗಣೇಶ ವಿಗ್ರಹವನ್ನು ಉದ್ಯಮಿ ಶ್ರೀಕಾಂತ್ ಅವರು ಹರಾಜಿನಲ್ಲಿ 5.50 ಲಕ್ಷಕ್ಕೆ ಖರೀದಿಸಿದರು.



ಮಾಜಿ ಸಂಸದ ಡಿ ವಿ ಸದಾನಂದ ಗೌಡ ಭಾಗವಹಿಸಿ ಮಾತನಾಡಿ,' ದಾಸರಹಳ್ಳಿಯ ಎಲ್ಲಾ ಜನರನ್ನು ಒಗ್ಗೂಡಿಸಿ ಗಣೇಶೋತ್ಸವ ಮಾಡುತ್ತಾ ದಾಸರಹಳ್ಳಿ ನಂಬರ್ ಒನ್ ಮಾಡಿದ ಕೀರ್ತಿ ಮುನಿರಾಜು ಅವರಿಗೆ ಸೇರುತ್ತದೆ' ಎಂದರು. ಶಾಸಕ ಎಸ್. ಮುನಿರಾಜು,' ಮೂರು ದಿನಗಳಿಂದ ಮಹಿಳೆಯರಿಗೂ ಮತ್ತು ಪುರುಷರಿಗೂ ವಿವಿಧ ಸ್ಪರ್ಧೆಗಳು, ಆಹಾರಮೇಳ ಮತ್ತು ಮನರಂಜನೆ ಏರ್ಪಡಿಸಲಾಗಿತ್ತು.ಈ ಹಿಂದೆ ಗಣೇಶನ ಪ್ರಸಾದ ಲಡ್ಡು ಖರೀದಿಸಿದ ಎಲ್ಲ–ರಿಗೂ ಒಳ್ಳೆಯದಾಗಿದೆ. ಹಿಂದುತ್ವದ ಸಾಂಪ್ರದಾಯಿಕ ಹಬ್ಬಗಳಲ್ಲಿ ಹೆಚ್ಚು ಒಗ್ಗೂಡುವಂತಹ ಹಬ್ಬ ಎಂದರೆ ಗೌರಿ ಗಣೇಶ ಹಬ್ಬ, ಇಂದು ಸಾವಿರಾರು ಜನರು ಭಾಗವಹಿಸಿ ಅದ್ದೂರಿ ಮೆರವಣಿಗೆ ಮೂಲಕ ವಿಸರ್ಜನೆ ಮಾಡಲಾಗುತ್ತಿದೆ' ಎಂದರು.

ಉದ್ಯಮಿ ಶ್ರೀಕಾಂತ್ ಮಾತನಾಡಿ' ಗಣೇಶನ ಮೇಲೆ ಇಟ್ಟಿರುವ ಶ್ರದ್ಧೆ, ಭಕ್ತಿಗೋಸ್ಕರ ಮತ್ತು ಉದ್ಯಮ ಕ್ಷೇತ್ರದಲ್ಲಿ ಅಭಿವೃದ್ಧಿ ಸಾಧಿಸಲು ಹಾಗೂ ನಾಡಿನ ಜನತೆಯ ಶ್ರೇಯ ಅಭಿವೃದ್ಧಿಗೋಸ್ಕರ ಲಡ್ಡು ಪ್ರಸಾದ ಖರೀದಿಸಿದ್ದೇನೆ' ಎಂದರು.
ಮೆರವಣಿಯಲ್ಲಿ 51 ಕ್ಕೂ ಹೆಚ್ಚು ಗಣೇಶ ಮೂರ್ತಿಗಳು ಇದ್ದವು. ಕಲಾತಂಡಗಳಾದ ನಾಸಿಕ್ ಡೋಲ್, ಚಂಡೆ ವಾದ್ಯ, ಬ್ಯಾಂಡ್, ಡೊಳ್ಳು ಕುಣಿತ, ಗೊಂಬೆ ಕುಣಿತ, ಇನ್ನು ಮುಂತಾದವು, ಕೇರಳದಿಂದ ಬಂದ ಕಲಾತಂಡಗಳಿಂದ ಅದ್ದೂರಿ ಮೆರವಣಿಗೆಗೆ ಮೆರುಗು ನೀಡಿತು. ಭಕ್ತಾದಿಗಳು ಮೆರವಣಿಗೆಯಲ್ಲಿ ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ಎಂಇಐ ಆಟದ ಮೈದಾನದಿಂದ ಮೆರವಣಿಗೆ ಪ್ರಾರಂಭವಾಗಿ ಬಾಗಲಗುಂಟೆ ಮಾರಮ್ಮನ ದೇವಸ್ಥಾನ, ಹೆಸರಘಟ್ಟ ಮುಖ್ಯ ರಸ್ತೆ, ಮಲ್ಲಸಂದ್ರದ ಪೈಪ್ ಲೈನ್, ಸೆಲೆಕ್ಷನ್ ಕಾರ್ನರ್ ಮೂಲಕ ಸಾಗಿ ದಾಸರಹಳ್ಳಿ ರಾಷ್ಟ್ರೀಯ ಹೆದ್ದಾರಿ ಮೂಲಕ ಚೊಕ್ಕಸಂದ್ರದ ಕೆರೆ ಹತ್ತಿರ ವಿಸರ್ಜಿಸಲಾಯಿತು. ಬಿಜೆಪಿ ಮಂಡಲ ಅಧ್ಯಕ್ಷ ಸೋಮಶೇಖರ್, ಬಿಜೆಪಿ ಮುಖಂಡರಾದ ಸುಜಾತ ಎಸ್ ಮುನಿರಾಜು, ಬಿ.ಎಂ. ನಾರಾಯಣ್, ಪಿ.ಎಚ್ ರಾಜು, ಟಿ.ಶಿವಕುಮಾರ್, ಬಿ.ಆರ್. ಸತೀಶ್, ಗುರು ನಿಶ್ಚಲ್, ಯುವಮೋರ್ಚಾ ಪ್ರಧಾನ ಕಾರ್ಯದರ್ಶಿ ಸೌಂದರ್ಯ ಭರತ್, ಜಿ. ಗುರುಪ್ರಸಾದ್, ನಿಸರ್ಗ ಕೆಂಪರಾಜು, ಮಲ್ಲಸಂದ್ರ ರಘು ಮುಂತಾದವರಿದ್ದರು.

# ಶಿಕ್ಷಣದಿಂದ ಮಾತ್ರ ಅನಿಷ್ಠ ಪದ್ಧತಿಗಳ ನಿರ್ಮೂಲನೆ ಸಾಧ್ಯ..!



ಮೊಳಕಾಲ್ಮೂರು: ಸಮಾಜದೊಳಗಿನ ಅನಿಷ್ಟ ಪದ್ದತಿ ಮತ್ತು ಮೌಢ್ಯ ಆಚರಣೆಗಳು ತೊಲಗಲು ಮೌಲ್ಯಯುತ ಶಿಕ್ಷಣದ ಅಗತ್ಯವಿದೆ ಎಂದು ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಶಾಖಾ ಮಠದ ಪೀಠಾಧಿಪತಿ ಮ.ನಿ.ಪ್ರ. ಬಸವಲಿಂಗ ಸ್ವಾಮೀಜಿ ತಿಳಿಸಿದರು ಅವರು ಶ್ರೀಮಠದ ಆವರಣದಲ್ಲಿ ಆಶ್ರಿತಾ ಸಂಸ್ಥೆ ಚಿತ್ರದುರ್ಗ ಹಾಗೂ ಚಿತ್ತರಗಿ ಶ್ರೀ ವಿಜಯ ಮಾಂತೇಶ್ವರ ಸಾಂಸ್ಕೃತಿ–ಕ ಮತ್ತು ಕ್ರೀಡಾ ಯುವಕ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ"ಬಾಲ್ಯ ವಿವಾಹವನ್ನು ಕೊನೆಗೊಳಿಸಲು ಜಾಗತಿ–ಕ ಅಂತರ್ಧರ್ಮಿಯ ವಾರಾಂತ್ಯದ ಪ್ರತಿಜ್ಞೆ"ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಸ್ಪೃಶ್ಯತೆಯಂತೆಯೇ ಬಾಲ್ಯ ವಿವಾಹ ಮತ್ತು ಬಾಲಕಾರ್ಮಿಕ ಪದ್ಧತಿಗಳು ಸಾಮಾಜಿಕ ಪಿಡುಗುಗಳಾಗಿದ್ದು ಇವುಗಳಿಂದ ಸಾಮಾಜಿ–ಕ ಅಸಮತೋಲನ ಸಮಾಜವನ್ನು ಮತ್ತಷ್ಟು ಹಿಂದಕ್ಕೆ ಕರೆದುಯುತ್ತವೆ. ಇವುಗಳ ನಿರ್ಮೂಲನೆಗಾಗಿಯೇ 12ನೇ ಶತಮಾನದಿಂದಲೂ ಹಲವಾರು ಸಾಮಾಜಿಕ ಚಳುವಳಿಗಳು ನಡೆದು ಆದರೆ ಇಂದಿಗೂ ಅಲ್ಲಲ್ಲಿ ಇಂತಹ ಆಚರಣೆಗಳು ವರದಿಯಾಗುತ್ತಿರುವುದು ಯೋಚನೆಯ ಸಂಗತಿ ಎಂದರು.

ವಯಸ್ಕ ರಲ್ಲದ ಮಕ್ಕಳಿಗೆ ಮದುವೆ ಮಾಡಿದರೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಪ್ರಬಲರಾಗಿರುವುದಿಲ್ಲ ಇದರಿಂದ ಆರೋಗ್ಯದ ಸಮಸ್ಯೆಗಳು ಮತ್ತು ಸಾಮಾಜಿಕ ಅಡಚಣೆಗಳನ್ನು ಎದುರಿಸುತ್ತಾರೆ ಹಾಗಾಗಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸಿಕೊಡಬೇಕಾಗಿದೆ ಎಂದು ತಿಳಿಸಿದರು.

ಸಮಾಜ ಸೇವಕ ಅಜ್ಜೇರಿ ತಿಪ್ಪೇಸ್ವಾಮಿ ಮಾತನಾಡಿ ಬಾಲ್ಯ ವಿವಾಹ ಮತ್ತು ಮೌಢ್ಯ ಆಚರಣೆಗಳು ತಾಲೂಕಿನಲ್ಲಿ ಇನ್ನೂ ಜೀವಂತವಾಗಿದ್ದು ಅವುಗಳನ್ನು ತೊಲಗಿಸಲು ಆಶ್ರಿತಾ ಸಂಸ್ಥೆಯು ನಿರಂತರ ಶ್ರಮಿಸುತ್ತಿದ್ದು ಇಂತಹ ಸಂಘಟನೆಗಳಿಗೆ ಸಾರ್ವಜನಿಕರ ಬೆಂಬಲದ ಅಗತ್ಯವಿದೆ ಎಂದರು. ಆಶ್ರಿತ ಸಂಸ್ಥೆಯ ತಾಲೂಕು ಸಾಮಾಜಿಕ ಸಂಘಟಕರಾದ ಹರ್ಷವರ್ಧನ್.ಸಿ.ಜಿ.ಹಳ್ಳಿ. ಧನಂಜಯ ಭಟ್ರಹಳ್ಳಿ. ದೇವಿರಮ್ಮ. ಮತ್ತು ಬಿ ಮಲ್ಲೇಶಪ್ಪ ಇತರರು ಹಾಜರಿದ್ದರು.

# ಸಂತಪೂರ ಮರಿಯ ಕೃಪಾ ದವಖಾನೆ ಯಲ್ಲಿ ಉಚಿತದಂತ ಶಿಬಿರ



ಔರಾದ: ತಾಲೂಕಿನ ಸಂತಪೂರ ಗ್ರಾಮದ ಮರಿಯ ಕೃಪ ದವಾಖಾನೆ, ದೀಪಾಲಿಯ ಸಮಾಜ ಸೇವಾ ಸಂಸ್ಥೆ ಸಂತಪೂರ, ಆರ್ಬಿಟ್ ಸಮಾಜ ಸೇವಾ ಹುಮ್ನಾಬಾದ್, ಹಾಗೂ ಎಸ್ ಬಿ ಪಾಟೀಲ್ ದಂತ ಮಹಾವಿದ್ಯಾಲಯ ಹಾಗೂ ಆಸ್ಪತ್ರೆ, ಬೀದರ್, ಇವರ ಸಂಂ–ಯುಕ್ತ ಆಶ್ರಯದಲ್ಲಿ ಇಂದು ಸಂತಪೂರನ ಮರೆಯ ಕೃಪಾ ಆಸ್ಪತ್ರೆ ಯಲ್ಲಿ ಉಚಿತ ದಂತ ಆರೋಗ್ಯ ಶಿಬಿರ ಕಾರ್ಯಕ್ರಮ ಕಾರ್ಯಕ್ರಮಯೋಜಿಸಲಾಗಿತ್ತು.

ಸಂತಪೂರ ಪ್ರಾಥಮಿಕ ಆರೋಗ್ಯ ಕೇಂದ್ರ ದಂತ ವೈದ್ಯಾಧಿಕಾ–ರಿಗಳಾದ ಶ್ರೀಮತಿ ರೇಣುಕಾ ರವರು ಉದ್ಘಾಟಿಸಿ ಮಾತನಾಡಿದರು, ಎಸ್ ಬಿ ಪಾಟೀಲ್ ದಂತ ಮಹಾ ವಿದ್ಯಾಲಯದ ಎಚ್ ಓ ಡಿ ಶ್ರೀ ಸಿದ್ದಣ ಗೌಡ ಅವರು ದಂತ ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ವಿಶೇಷ ಉಪನ್ಯಾಸ ಮಂಡಿಸಿದರು ಮತ್ತು ಜಾಗೃತಿಗೊಳಿಸಿದರು. ಕೆಪಿಸಿಸಿ ಸಾಮಾಜಿಕ ಮಾಧ್ಯಮ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ಔರಾದ ವಿಧಾನಸಭಾ ಕ್ಷೇತ್ರ ಕಾಂಗ್ರೆಸ್ ಮುಖಂಡರಾದ ಸುಧಾಕರ್ ಕೊಳ್ಳುರ ಅವರು ಮಾತನಾಡಿ ದೀಪಾಲಯ ಸಂಸ್ಥೆ ಇತರ ಸಾಮಾಜಿಕ ಕಾರ್ಯಗಳಿಗೆ ಹೆಸರಾಗಿದೆ ಎಂದು ಶ್ಲಾಘನೀಯ ವ್ಯಕ್ತಪಡಿಸಿದ್ದರು.

ಹೋಲಿ ಕ್ರಾಸ್ ಚರ್ಚ್ ಫಾದರ್ ಕ್ಲಿವನ ಗೋಮ್ಸ ರವರು ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದರು. ಮರಿಯಕ್ ರೂಪ ಆಸ್ಪತ್ರೆಯ ಮುಖ್ಯಸ್ಥರಾದ ಸಿಸ್ಟರ್ ರೇಷ್ಮಾ, ಉಪನ್ಯಾಸಕರಾದ ಶಿವಕುಮಾರ್ ಮಠಪತಿ ಸ್ವಾಮಿ, ಮರಿಯ ಕೃಪಾ ದವಖಾನೆ ಮುಖ್ಯಸ್ಥರಾದ, ಸಿಸ್ಟರ್ ಶಕುಂದಾ, ದೀಪಾಲಿಯ ಸಮಾಜ ಸೇವಾ ಸಂಸ್ಥೆ ಮುಖ್ಯಸ್ಥರಾದ ಸಿಸ್ಟರ್ ಲಿನೆಟ, ಆರ್ಬಿಟ್ ಸಂಸ್ಥೆ ಯ ಮುಖ್ಯಸ್ಥರಾದ ಶಿವಕುಮಾರ್, ರೂಬಿನ್ ಹಾಗೂ ಮುಂತಾದರೂ ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.